ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

(ಅ) ಸಣ್ಣ ನೀರಾವರಿ ಇಲಾಖೆಯಲ್ಲಿ ಈ ರೀತಿಯ ಪ್ರಸ್ತಾವನೆ ಇರುವುದಿಲ್ಲ.

(ಆ) ಉದ್ಭವಿಸುವುದಿಲ್ಲ.

ಐ.ಟಿ.ಐ ಕಾಲೇಜಿಗೆ ಕಟ್ಟಡ ನಿರ್ಮಾಣ

321(858) ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ) ಮಾನ್ಯ ಕಾರ್ಮಿಕ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹೊಸಪೇಟೆಯಲ್ಲಿ ಐಟಿಐ ಕಾಲೇಜು ಇದ್ದು, ಸದರಿ ಕಾಲೇಜಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಟ್ಟಡ ಸ್ಥಾಪನೆಗೆ ಯಾವ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ;

(ಇ) ಕಟ್ಟಡ ಸ್ಥಾಪನೆಗೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು)

(ಅ) ಹೌದು.

(ಆ) ಸ್ವಂತ ಕಟ್ಟಡ–ಹೊಂದಲು ಅವಶ್ಯವಾಗಿರುವ ಟಿ.ಬಿ. ಡ್ಯಾಂ ಪ್ರಾಧಿಕಾರಕ್ಕೆ ಸೇರಿದ ಜಮೀನನ್ನು ಇಲಾಖೆಯ ವಶಕ್ಕೆ ಪಡೆಯಲು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಟಿ.ಬಿ. ಡ್ಯಾಂ ಪ್ರಾಧಿಕಾರದಿಂದ ಮಂಜೂರಾತಿ ನಿರೀಕ್ಷಿಸಲಾಗಿದೆ.

(ಇ) ಹೊಸಪೇಟೆಯಲ್ಲಿ ಸರ್ಕಾರಿ ಜಮೀನು ಸಿಗುವುದು ಕಷ್ಟಕರವಾಗಿರುವುದರಿಂದ ಕಟ್ಟಡ ಸ್ಥಾಪನೆಗೆ ವಿಳಂಬವಾಗಿರುತ್ತದೆ. ಜಮೀನು ಸಿಕ್ಕಿದ ನಂತರ ಕಟ್ಟಡ ನಿರ್ಮಾಣಕ್ಕೆ ಅನುದಾನ ಲಭ್ಯವಾದಲ್ಲಿ ಕಟ್ಟಡ ಕಾಮಗಾರಿ ಪ್ರಾರಂಭಿಸಲಾಗುವುದು.

ಮೂಲಭೂತ ಸೌಕರ್ಯ

322(678) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳು ವಿದ್ಯುತ್ ಅಭಾವದಿಂದ ಮತ್ತು ಮೂಲಭೂತ ಸೌಕರ್ಯಗಳ ಕೊರತೆಯಿಂದ ಮುಚ್ಚುವ ಹಂತಕ್ಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;